16-12-2024

**ಕರ್ನಾಟಕ ವಿಧಾನ ಪರಿಷತ್ತು**
**ಶೂನ್ಯ ವೇಳೆ ಸೂಚನೆ**

**ಶ್ರೀ. ಬಿ.ಕೆ. ಹರಿಪ್ರಸಾದ ಕರ್ನಾಟಕ ವಿಧಾನಪರಿಷತ್ತಿನ ಸದಸ್ಯರು ಇವರು ಕೇಳಿರುವ ಸಾರ್ವತ್ರಿಕ ಆರೋಗ್ಯ ಆಂದೋಲನ- ಕರ್ನಾಟಕವು ಗ್ರಾಮದ ವರ್ಕಸ್ ಯೂನಿಯನ್, ಬೀಡಿ ಕಾರ್ಮಿಕರ ಯೂನಿಯನ್, ಆಶಾ ಯೂನಿಯನ್, ಲಿಂಗತ್ವ ಮತ್ತು ಲೈಂಗಿಕ ಅಲ್ಪಸಂಖ್ಯಾತರ ಸಂಘಟನೆಗಳು, ಕಟ್ಟಡ ನಿರ್ಮಾಣ ಕಾರ್ಮಿಕರ ಸಂಘ, ತ್ಯಾಜ್ಯಆಯುವವರು, ವೃದ್ಧರು, ಪೌರಕಾರ್ಮಿಕರು, ದಲಿತ ಸಂಘಟನೆಗಳು, ಬುಡಕಟ್ಟು ಸಮುದಾಯಗಳು, ಲೈಂಗಿಕ ಕಾರ್ಮಿಕರ ಸಂಘಟನೆಗಳು, ಆರೋಗ್ಯ ಸಂಪನ್ಮೂಲ ಸಂಸ್ಥೆಗಳು ಮುಂತಾದ 30 ವಿವಿಧ ಸಂಸ್ಥೆಗಳು/ನೆಟ್ವರ್ಕ್/ಒಕ್ಕೂಟಗಳನ್ನು ಒಳಗೊಂಡಿದ್ದು, ಈ ಹಕ್ಕೋತ್ತಾಯಗಳ ಬಗ್ಗೆ ಧರಣಿ ನಡೆಸಿರುತ್ತಾರೆ. ಅವರ ಹಕ್ಕೊತ್ತಾಯಗಳೆಂದರೆ, ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳನ್ನು ಖರೀದಿಸಲು ಚೀಟಿ ಕೊಡಬಾರದೆನ್ನುವುದು, ಆಸ್ಪತ್ರೆಗಳ ಬಳಕೆದಾರರ ಶುಲ್ಕವನ್ನು ರದ್ದುಗೊಳಿಸಬೇಕೆನ್ನುವುದು, ಆರೋಗ್ಯ ವ್ಯವಸ್ಥೆಯನ್ನು ಖಾಸಗೀಕರಣಗೊಳಿಸುವುದನ್ನು ನಿಲ್ಲಿಸಬೇಕೆನ್ನುವುದು, ಸಾರ್ವತ್ರಿಕ ಆರೋಗ್ಯ ರಕ್ಷಣೆಸಲುವಾಗಿ ಆರೋಗ್ಯ ವಿಮೆಯ ಬಗ್ಗೆ ಅಧ್ಯಯನ ನಡೆಸುವುದು, ಕೊಳೆಗೇರಿ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸಂಜೆ ವೇಳೆ ಆರೋಗ್ಯಕೇಂದ್ರವನ್ನು ತೆರೆದಿಡಬೇಕೆನ್ನುವುದು ಸಿಬ್ಬಂದಿ ಕೊರತೆಯನ್ನು ನೀಗಿಸಬೇಕೆನ್ನುವುದು, ರೋಗಗಳು ಸಂಭವಿಸದಂತೆ ತಡೆಯಲು ಆರೋಗ್ಯ ಶಿಕ್ಷಣ ಮತ್ತು ಪ್ರಚಾರ ಕಾರ್ಯಕ್ರಮಗಳನ್ನು ಕೈಗೊಳ್ಳಬೇಕೆನ್ನುವುದು, ಆರೋಗ್ಯ ಹಕ್ಕು ಕಾಯಿದೆಯನ್ನು ಜಾರಿಗೆತರಬೇಕೆನ್ನುವುದು ಪ್ರಮುಖ ಹಕ್ಕೋತ್ತಾಯವಾಗಿದ್ದು, ಇವರ ಹಕ್ಕೊತ್ತಾಯಗಳನ್ನು ಸರ್ಕಾರ ಪರಿಶೀಲಿಸಿ ಜಾರಿಗೆ ತರಲು ಕ್ರಮಕೈಗೊಳ್ಳುವ ಕುರಿತು:**

**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಹೇಳಿಕೆ:-**

ಈ ವಿಷಯವು ಸರ್ಕಾರದ ಗಮನಕ್ಕೆ ಬಂದಿದ್ದು,ಈಗಾಗಲೇ 2016-17 ಸಾಲಿನಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದ ರಾಷ್ಟ್ರೀಯ ಉಚಿತ ಔಷಧಿಸೇವೆಗಳ ಕಾರ್ಯಕ್ರಮದ ಅಡಿಯಲ್ಲಿ ಪ್ರತಿವರ್ಷ ಉಪಕೇಂದ್ರಗಳಿಗೆ, ಪ್ರಾಥಮಿಕ ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ, ಸಮುದಾಯ ಆರೋಗ್ಯ ಕೇಂದ್ರಗಳಿಗೆ ತಾಲ್ಲೂಕು ಆರೋಗ್ಯ ಕೇಂದ್ರಗಳಿಗೆ, ಜಿಲ್ಲಾ ಮತ್ತು ರಾಜ್ಯಮಟ್ಟದ ಆಸ್ಪತ್ರೆಗಳಿಗೆ ಮಾರ್ಗಸೂಚಿಗಳನ್ವಯ ಅನುಮೋದಿತ ಅನುದಾನದಲ್ಲಿ ಶೇ. 20 ರಷ್ಟು ಅನುದಾನವನ್ನು ಸ್ಥಳೀಯವಾಗಿ ಜಿಲ್ಲಾಮಟ್ಟದಲ್ಲಿ ಅಗತ್ಯ ಔಷಧಿಗಳನ್ನು ಖರೀದಿಸಿ ಸಾರ್ವಜನಿಕರಿಗೆ ಉಚಿತ ಸೇವೆಗಳನ್ನು ಒದಗಿಸಲು ಹಾಗೂ ಇನ್ನುಳಿದ ಶೇ80 ರಷ್ಟು ಅನುದಾನದನ್ನು ರಾಜ್ಯಮಟ್ಟದಲ್ಲಿ KSMSCL ನಿಂದ ಖರೀದಿಸಿ ಜಿಲ್ಲಾ ಔಷಧಿ ಉಗ್ರಾಣಾಗಳಿಗೆ (District Ware House) ನಿರಂತರವಾಗಿ ಸರಬರಾಜು ಮಾಡಲಾಗುತ್ತಿದೆ.

**ಮುಂದುವರೆದು, ರಾಷ್ಟ್ರೀಯ ಉಚಿತ ಔಷಧಿ ಸೇವೆಗಳ ಕಾರ್ಯಕ್ರಮದ ಜಿಲ್ಲಾವಾರು ಅನುದಾನ ಹಂಚಿಕೆಯು ಈ ಕೆಳಕಂಡಂತಿದೆ.**

| _Unit cost wise Details | | |
|---|---|---|
| **Sl. No** | **Facilities** | **Total Amount release per Facility (in Rs.)** |
| 1 | Sub Centre | 9600/- |
| 2 | Primary Health Centres | 36000/- |
| 3 | Community Health Centers | 72000/- |
| 4 | Taluka Hospital | 120000/- |
| 5 | District Hospital | 192000/- |
| 6 | State Level Hospital | 192000/- |

ಮೇಲೆ ತಿಳಿಸಿದಂತೆ, ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಆರ್.ಓ.ಪಿ 2024-25ರಲ್ಲಿ ರೂ.9091.20 ಲಕ್ಷಗಳು ಅನುದಾನ ಅನುಮೋದನೆಗೊಂಡಿದ್ದು, ಮಾರ್ಗಸೂಚಿ ಅನ್ವಯ ಶೇ 20% ರಷ್ಟು ಅನುದಾನವನ್ನು ರಾಜ್ಯದ ಆರೋಗ್ಯ ಸಂಸ್ಥೆಗಳಿಗೆ (ಜಿಲ್ಲಾ ಆಸ್ಪತ್ರೆ, ತಾಲ್ಲೂಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಗಳಿಗೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ) ಸ್ಥಳೀಯವಾಗಿ ಅಗತ್ಯ ಔಷಧಿಗಳನ್ನು ಖರೀದಿಸಲು ಆರೋಗ್ಯ ಸಂಸ್ಥೆಗಳಿಗೆ ಅನುದಾನವನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ರಾಷ್ಟ್ರೀಯ ಉಚಿತ ಔಷಧಿ ಸೇವೆಗಳ ಕಾರ್ಯಕ್ರಮದ ಅಡಿಯಲ್ಲಿ ಒಟ್ಟು **ರೂ.1818.24 ಲಕ್ಷಗಳನ್ನು** ಜಿಲ್ಲಾವಾರು ಹಂಚಿಕೆ ಮಾಡಲಾಗಿರುತ್ತದೆ. ಉಳಿಕೆ ಅನುದಾನದಲ್ಲಿ Programmatic Drugs ಖರೀದಿಸಲು KSMSCL ಗೆ Indent ನೀಡಲಾಗಿದೆ. ಈ ಮೂಲಕ ಔಷಧಿಗಳನ್ನು ಪೂರೈಸಲಾಗುತ್ತಿದೆ.

ಆಸ್ಪತ್ರೆಗಳ ಬಳಕೆದಾರ ಶುಲ್ಕಕ್ಕೆ ಸಂಬಂಧಿಸಿದಂತೆ "ಬಿ.ಪಿ.ಎಲ್. ಕಾರ್ಡ್ ಬಳಕೆದಾರರಲ್ಲಿ ಯಾವುದೇ ಬಳಕೆದಾರರ ಶುಲ್ಕವನ್ನು ವಿಧಿಸಲಾಗುತ್ತಿಲ್ಲ ಹಾಗೂ ಎ.ಪಿ.ಎಲ್ ಬಳಕೆದಾರರಲ್ಲಿ ನಿಯಮಾನುಸಾರ ಬಳಕೆದಾರರ ಶುಲ್ಕವನ್ನು ವಿಧಿಸಲಾಗುತ್ತಿದೆ.

ನಗರ ಪ್ರದೇಶಗಳಿಗೆ ವಲಸೆ ಬರುವ ಜನಸಂಖ್ಯೆಯು ಅಧಿಕವಾಗಿದ್ದು, ಬಹುತೇಕ ಜನರು ಆರೋಗ್ಯ ಸೇವೆಗಳಿಂದ ವಂಚಿತರಾಗುತ್ತಿರುವುದರಿಂದ ನಗರಪ್ರದೇಶದ ಆರೋಗ್ಯ ಕ್ಷೇತ್ರದ ಬಲವರ್ಧನೆಗಾಗಿ, ತಳಮಟ್ಟದಿಂದ ಬಲಪಡಿಸುವ ಮತ್ತು ಸುಧಾರಣೆ ತರುವುದು ಅತ್ಯಂತ ಅವಶ್ಯವಾಗಿರುತ್ತದೆ. ನಗರ ಪ್ರದೇಶದ ಜನರ ಆರೋಗ್ಯ ಸುಧಾರಣೆಗಾಗಿ ಈಗಾಗಲೇ ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನದಡಿ ಪ್ರತಿ 50000 ಜನಸಂಖ್ಯೆಗೆ ಒಂದರಂತೆ ರಾಜ್ಯಾದ್ಯಂತ 365 ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. 50000 ಜನಸಂಖ್ಯೆಯನ್ನು ಹೊರತುಪಡಿಸಿ, ಉಳಿದ ಜನಸಂಖ್ಯೆಗೆ ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಲ್ಲದ ಸ್ಥಳಗಳಲ್ಲಿ 15000-20000 ಬಿಟ್ಟು ಹೋದ ಜನಸಂಖ್ಯೆಗೆ ಒಂದರಂತೆ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ 511 "ನಗರ ಆರೋಗ್ಯ ಮತ್ತು ಕ್ಷೇಮ ಕೇಂದ್ರ – ನಮ್ಮ ಕ್ಲಿನಿಕ್" ಗಳು ಕಾರ್ಯನಿರ್ವಹಿಸುತ್ತಿವೆ.

ನಗರ ಪ್ರದೇಶದಲ್ಲಿ ಹೆಚ್ಚಾಗಿ ದುಡಿಯುವ ವರ್ಗದ ಜನಸಂಖ್ಯೆ ಇರುವುದರಿಂದ ಸದರಿ ಜನರಿಗೆ ಸಂಜೆ ವೇಳೆಯಲ್ಲಿ ಆರೋಗ್ಯ ಸೇವೆ ಪಡೆಯಲು ಅನುಕೂಲವಾಗುವಂತೆ ನಮ್ಮ ಕ್ಲಿನಿಕ್‌ಗಳ ಕಾರ್ಯನಿರ್ವಹಣಾ ಸಮಯವನ್ನು ಸಾರ್ವಜನಿಕರಿಗೆ ಅಗತ್ಯ ಆರೋಗ್ಯ ಸೇವೆಯನ್ನು ಅನೂಕುಲಕರ ಸಮಯದಲ್ಲಿ ಒದಗಿಸುವ ನಿಟ್ಟಿನಲ್ಲಿ ಬೆಳಿಗ್ಗೆ 8.00 ರಿಂದ ಮಧ್ಯಾಹ್ನ 12.00 ರವರೆಗೆ ಮತ್ತು ಸಂಜೆ 4.00 ರಿಂದ 8.00 ರ ಬದಲಾಗಿ ಮಧ್ಯಾಹ್ನ 12.00 ರಿಂದ ಸಂಜೆ8.00 ರವರೆಗೆ ಮರು ನಿಗದಿಪಡಿಸಲಾಗಿರುತ್ತದೆ. ಮುಂದುವರೆದು, ಸ್ಥಳೀಯ ಅಗತ್ಯತೆಗನುಗುಣವಾಗಿ ನಮ್ಮ ಕ್ಲಿನಿಕ್‌ಗಳ ಕಾರ್ಯನಿರ್ವಹಣಾ ಸಮಯವನ್ನು ನಿಗದಿಪಡಿಸಿಕೊಳ್ಳಲು ಜಿಲ್ಲೆಗಳಿಗೆ ಅನುವು ಮಾಡಿಕೊಡಲಾಗಿದೆ.

ಆರೋಗ್ಯ ರಕ್ಷಣೆಯ ಸಲುವಾಗಿ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮೂಲಕ ಕರ್ನಾಟಕ ರಾಜ್ಯದಲ್ಲಿ ದಿನಾಂಕ:30.10.2018 ರಿಂದ ಸಂಯೋಜಿತ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯು ಅನುಷ್ಠಾನಗೊಂಡು ತದನಂತರ, ಆಗಸ್ಟ್ 2022ರಲ್ಲಿ ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನಾರೋಗ್ಯ ಯೋಜನಾ ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಎಂದು ಮರು ನಾಮೀಕರಿಸಲಾಗಿದೆ. ಅಸ್ತಿತ್ವದಲ್ಲಿರುವ ಎಲ್ಲಾ ಆರೋಗ್ಯ ಯೋಜನೆಗಳ ಫಲಾನುಭವಿಗಳನ್ನು ಒಳಗೊಳ್ಳುವ ಏಕೈಕ ಸಾರ್ವತ್ರಿಕ ಆರೋಗ್ಯ ರಕ್ಷಣಾ ಯೋಜನೆ ಇದಾಗಿದೆ. ಕರ್ನಾಟಕ ರಾಜ್ಯದಲ್ಲಿ ಈ ಯೋಜನೆಯನ್ನು ಸಾರ್ವತ್ರಿಕ ಆರೋಗ್ಯ ರಕ್ಷಣೆಯ (Universal Health Coverage) ಸಲುವಾಗಿ ಎಪಿಎಲ್ ಮತ್ತುಬಿಪಿಎಲ್ ಫಲಾನುಭವಿಗಳಿಗೆ ಆರೋಗ್ಯ ಭರವಸೆ ಮಾದರಿಯಲ್ಲಿ (Health Assurance Mode) ಸುವರ್ಣ ಆರೋಗ್ಯ ಸುರಕ್ಷಾಟ್ರಸ್ಟ್ ವತಿಯಿಂದ ಅನುಷ್ಠಾನಗೊಳಿಸಲಾಗಿದೆ.

ಈ ಯೋಜನೆಯ ಕುರಿತು ಕರ್ನಾಟಕ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಪ್ರಾಧಿಕಾರ ರವರಿಗೆ "ಎಲ್ಲರಿಗೂ ಆರೋಗ್ಯ – ಆಯುಷ್ಮಾನ್ ಭಾರತ್ ಯೋಜನೆ"ಯ ಮೌಲ್ಯಮಾಪನ ಅಧ್ಯಯನ ಕೈಗೊಳ್ಳಲು ಅನುಮೋದನೆ ನೀಡಲಾಗಿದೆ.

ಇಲಾಖಾವತಿಯಿಂದ ಸಾರ್ವಜನಿಕರಲ್ಲಿ ಆರೋಗ್ಯ ಕಾರ್ಯಕ್ರಮಗಳ ಕುರಿತಂತೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮ /ಯೋಜನೆಗಳ ಬಗ್ಗೆ ಹಾಗೂ ರೋಗಗಳ ತಡೆಗಟ್ಟುವಿಕೆಯ ಬಗ್ಗೆ ನಿರಂತರವಾಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ವಿವಿಧ ಮಾಧ್ಯಮಗಳ ಮೂಲಕ (ದೃಶ್ಯ / ಶ್ರಾವ್ಯ / ಮುದ್ರಣ / ಡಿಜಿಟಲ್ / ಸಾಮಾಜಿಕ ಮಾಧ್ಯಮ ಹಾಗೂ ಇತರೆ ಮಾಧ್ಯಮಗಳಲ್ಲಿ) ಆರೋಗ್ಯ ಶಿಕ್ಷಣ ಮತ್ತು ಪ್ರಚಾರ (ಐ.ಇ.ಸಿ) ಚಟುವಟಿಕೆಗಳನ್ನು ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಅನುಷ್ಠಾನಗೊಳಿಸಲಾಗುತ್ತಿರುತ್ತದೆ.

ಸ್ಥಳೀಯವಾಗಿ, ಆರೋಗ್ಯ ಕೇಂದ್ರಗಳಲ್ಲಿ ಹಾಗೂ ಆರೋಗ್ಯ ಸಿಬ್ಬಂದಿಗಳು ಗ್ರಾಮಗಳಿಗೆ ಭೇಟಿ ನೀಡಿದಂತಹ ಸಂದರ್ಭದಲ್ಲಿಯೂ ಸಹ ಸಾರ್ವಜನಿಕರಿಗೆ ಅಗತ್ಯ ಆರೋಗ್ಯ ಶಿಕ್ಷಣವನ್ನು ನೀಡಲಾಗುತ್ತಿರುತ್ತದೆ.

ರಾಜ್ಯದಲ್ಲಿ ಖಾಲಿ ಇರುವ ವೈದ್ಯಕೀಯ ಹಾಗೂ ಅರೆವೈದ್ಯಕೀಯ ಸಿಬ್ಬಂದಿಗಳ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮಕೈಗೊಳ್ಳಲಾಗುತ್ತಿದೆ.

1. 100 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ 120 ತಜ್ಞ ವೈದ್ಯರುಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ .

2. The Karnataka compulsory service by candidates completed Medical courses Act, 2012 ಹಾಗೂ ಕಾಲಕಾಲಕ್ಕೆ ಮಾಡಲಾದ ತಿದ್ದುಪಡಿ ಕಾಯ್ದೆ ಹಾಗೂ ಇದರಡಿ ರಚಿಸಲಾದ ನಿಯಮದಡಿ ಎಂ.ಬಿ.ಬಿ.ಎಸ್./ಸ್ನಾತಕೋತ್ತರ ಪದವಿ ಪೂರೈಸಿ ಬರುವ ವೈದ್ಯರಿಗೆ ಒಂದು ವರ್ಷದ ಕಡ್ಡಾಯ ಸೇವೆಗೆ ನೇಮಿಸಲಾಗುತ್ತಿದೆ.

3. ಇಲಾಖೆಯಲ್ಲಿ ಸೇವಾನಿರತ ಕೋಟಾ ಅಡಿಯಲ್ಲಿ ಉನ್ನತ ವ್ಯಾಸಂಗಕ್ಕೆ ತೆರಳಿ, ವ್ಯಾಸಂಗವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಹಿಂದಿರುಗುವ ವೈದ್ಯರಿಗೆ ಅವರು ಹೊಂದುವ ತಜ್ಞತೆಯ ಹುದ್ದೆಗೆ ನೇಮಿಸಲಾಗುತ್ತಿದೆ.

4. ಸರ್ಕಾರದ ಆದೇಶ ಸಂಖ್ಯೆ:ಆಕುಕ 619 ಹೆಚ್‌ಎಸ್‌ಹೆಚ್2022, ದಿ:17.01.2024ರಲ್ಲಿ ಆಕುಕ ಇಲಾಖೆಯಲ್ಲಿ ಖಾಲಿ ಇರುವ 337 ತಜ್ಞ ವೈದ್ಯರನ್ನು ಮತ್ತು 250 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕೆಲವೊಂದು ಷರತ್ತುಗಳಿಗೊಳಪಟ್ಟು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.

5. ಸುತ್ತೋಲೆ ಸಂಖ್ಯೆ : ಆಕುಕ 21 ಹೆಚ್‌ಎಸ್‌ಹೆಚ್ 2025, ದಿನಾಂಕ : 08/01/2025 ಮತ್ತು ಸೇರ್ಪಡೆ ಸಂಖ್ಯೆ:HFW/1/PRS/2025, ದಿನಾಂಕ: 25/01/2025 ಮತ್ತು ಪತ್ರ ಸಂಖ್ಯೆ ದಿನಾಂಕ: 29/01/2025ರಲ್ಲಿ ಒಟ್ಟಾರೆಯಾಗಿ 250 ಮಿತಿಯಲ್ಲಿ ಅಗತ್ಯಕ್ಕನುಗುಣವಾಗಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ/ತುರ್ತು ಚಿಕಿತ್ಸಾ ವೈದ್ಯಾಧಿಕಾರಿ/ ಹಿರಿಯ ವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.

6. ಆದೇಶ ಸಂಖ್ಯೆ: ಆಕುಕ 1072 ಹೆಚ್‌ಎಸ್‌ಹೆಚ್ 2024, ದಿನಾಂಕ:01/01/2025ರಲ್ಲಿ, ಇಲಾಯಲ್ಲಿ Hiring on per day basis, Hiring at AB-Ark rates & hiring for per-case basis ವಿಧಾನದಡಿ ತಜ್ಞ ವೈದ್ಯರ ಸೇವೆಯನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ.

7. ಅದೇಶ ಸಂಖ್ಯೆ : ಆಕುಕ 87 ಸಿಜಿಇ 2025, ದಿನಾಂಕ : 21/02/2025ರಲ್ಲಿ ಇಲಾಖೆಯಲ್ಲಿನ 08 ದಂತ ಆರೋಗ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಅನುಮತಿ ನೀಡಲಾಗಿದೆ.

8. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಉಳಿಕೆ ವೃಂದದಲ್ಲಿ ಖಾಲಿಯಿರುವ ವಿವಿಧ ವೃಂದದ 558 ಅರೆ ವೈದ್ಯಕೀಯ ಹುದ್ದೆಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡುವ ಬಗ್ಗೆ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಪ್ರಸ್ತುತ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯು ಪೂರ್ಣಗೊಂಡಿದ್ದು, ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಪ್ರಕಟಿಸುವ ಹಂತದಲ್ಲಿರುತ್ತದೆ.

9. ಸರ್ಕಾರದ ಪತ್ರ ಸಂಖ್ಯೆ : ಆಕುಕ 103 ಹೆಚ್‌ಎಸ್‌ಎಂ 2019, ದಿನಾಂಕ : 03/02/2024ರಲ್ಲಿ ಇಲಾಖೆಯಲ್ಲಿ ಖಾಲಿ ಇರುವ 200 ಕಿರಿಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಹಾಗೂ 400 ಫಾರ್ಮಸಿ ಅಧಿಕಾರಿಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡುವವರೆಗೆ ಜಿಲ್ಲಾ ಮಟ್ಟದ

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲು ಅನುಮತಿ ನೀಡಲಾಗಿದೆ.

10. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ವೃಂದದಲ್ಲಿನ ಖಾಲಿಯಿರುವ ಒಟ್ಟು 320 ವಿವಿಧ ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಅರ್ಹ ಅಭ್ಯರ್ಥಿಗಳ ದಾಖಲಾತಿ ಪರಿಶೀಲನಾ ಕಾರ್ಯ ಪೂರ್ಣಗೊಂಡಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸುವ ಹಂತದಲ್ಲಿದೆ.

11. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿನ ಕಲ್ಯಾಣ ಕರ್ನಾಟಕ ವೃಂದದಲ್ಲಿನ ಸಹಾಯಕ ಕೀಟ ಶಾಸ್ತ್ರಜ್ಞರ ಹುದ್ದೆಯನ್ನು ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಿದ್ದು, ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ ಖಾಲಿಯಿರುವ ಹುದ್ದೆಯನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

12. ಆದೇಶ ಸಂಖ್ಯೆ: ಆಕುಕ 333 ಹೆಚ್‌ಎಸ್‌ಎಂ 2023, ದಿನಾಂಕ: 21/12/2024 ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ 1205 ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ (ANM's) ಮತ್ತು 300 ಆರೋಗ್ಯ ನಿರೀಕ್ಷಣಾಧಿಕಾರಿ (HIO's) ಹುದ್ದೆಗಳನ್ನು ಕೆಲವೊಂದು ಷರತ್ತಿಗೊಳಪಟ್ಟು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು ಅನುಮೋದನೆ ನೀಡಲಾಗಿದೆ.

13. ಆದೇಶ ಸಂಖ್ಯೆ: ಆಕುಕ 01 ಸಿಜಿಎಂ 2019, ದಿ:24.06.2019 ರಲ್ಲಿ ನೀಡಿರುವ ಅನುಮತಿಯಂತೆ ಶೇ. 30 ರಷ್ಟು Non-Clinicalಗೂ ಶೇ.45 ರಷ್ಟು ಗ್ರೂಪ್-ಡಿ ಹುದ್ದೆಗಳನ್ನು ಒಟ್ಟಾರೆಯಾಗಿ ಶೇ.75ರಷ್ಟು ಮೀರದಂತೆ ಹೊರಗುತ್ತಿಗೆ ಮೂಲಕ ಟೆಂಡರ್ ಆಹ್ವಾನಿಸಿ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಿಗೆ ಜಿಲ್ಲಾಧಿಕಾರಿಗಳ ಅನುಮೋದನೆ ಪಡೆದು ನೇಮಕಾತಿ ಮಾಡಿಕೊಳ್ಳಲಾಗುತ್ತದೆ.

14. ರಾಷ್ಟ್ರೀಯ ಆರೋಗ್ಯ ಅಭಿಯಾನ ಅಡಿಯಲ್ಲಿ ವಿವಿಧ ವೃಂದಗಳ ಹುದ್ದೆಗಳನ್ನು ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುತ್ತಿದ್ದು ಹಾಗೂ ಆರ್.ಬಿ.ಎಸ್.ಕೆ ಮೊಬೈಲ್‌ಹೆಲ್ತ್ ತಂಡಗಳು ಸಹ ಕಾರ್ಯನಿರ್ವಹಿಸುತ್ತಿವೆ.

ಆಕುಕ 116 ಎಸ್.ಟಿ.ಕ್ಯೂ 2024

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು